# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 087
ಮಾನ್ಯ ಸದಸ್ಯರ ಹೆಸರು : ಶ್ರೀ. ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವವರು : ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು
ಉತ್ತರಿಸಬೇಕಾದ ದಿನಾಂಕ : 15.02.2022

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಉದ್ಯೋಗಿನಿ ಯೋಜನೆಯಡಿಯಲ್ಲಿ ಕಳೆದ 5 ವರ್ಷಗಳಿಂದ ಎಷ್ಟು ಜನ ಮಹಿಳೆಯರು ಪ್ರಯೋಜನ ಪಡೆದುಕೊಂಡಿರುತ್ತಾರೆ; | ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಉದ್ಯೋಗಿನಿ ಯೋಜನೆಯಡಿ ರಾಜ್ಯದಲ್ಲಿ ಕಳೆದ 05 ವರ್ಷಗಳಲ್ಲಿ ಒಟ್ಟು **19,447** ಮಹಿಳಾ ಫಲಾನುಭವಿಗಳು ಪ್ರಯೋಜನ ಪಡೆದಿರುತ್ತಾರೆ. |
| ಆ) | ಸಾಲ ಪಡೆಯಲು ಬ್ಯಾಂಕುಗಳಿಂದ NOC ಪಡೆಯಬೇಕೆ; ಹಾಗಿದ್ದಲ್ಲಿ, ಕೆಲವು ಬ್ಯಾಂಕುಗಳು ಹೊರತುಪಡಿಸಿ ಹಲವಾರು ಬ್ಯಾಂಕುಗಳು NOC ನೀಡಲು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಉದ್ಯೋಗಿನಿ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ:ಮಮಅ 32 ಮಅನಿ 2004 ಬೆಂಗಳೂರು ದಿನಾಂಕ:06.07.2004 ರ ಆದೇಶಾನುಸಾರ ಅನುಷ್ಠಾನಗೊಳಿಸಲಾಗುತ್ತಿದ್ದು, ಬ್ಯಾಂಕುಗಳಿಂದ NOC ಪಡೆಯಲು ಸೂಚಿಸಿರುವುದಿಲ್ಲ. NOC ನೀಡಲು ನಿರಾಕರಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಇ) | ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; | ಅನ್ವಯಿಸುವುದಿಲ್ಲ |
| ಈ) | ಕಿರುಸಾಲ ಯೋಜನೆಯಡಿಯಲ್ಲಿ ನೀಡಲಾಗುತ್ತಿರುವ ಸಹಾಯಧನ ಎಷ್ಟು; (ಇದರ ಫಲಾನುಭವಿಗಳ ವಿವರಗಳನ್ನು ಒದಗಿಸುವುದು; | ಕಿರುಸಾಲ ಯೋಜನೆಯಡಿ ಯಾವುದೇ ಸಹಾಯಧನ ಒದಗಿಸುತ್ತಿರುವುದಿಲ್ಲ. ಬದಲಿಗೆ ಬಡ್ಡಿರಹಿತ ಸಾಲ ಸೌಲಭ್ಯವನ್ನು ಮಾತ್ರ ಒದಗಿಸಲಾಗುತ್ತಿದೆ. |
| ಉ) | ಕೋಲಾರ ಜಿಲ್ಲೆಯಲ್ಲಿ ಮಹಿಳಾ ತರಬೇತಿ ಯೋಜನೆ ನಡೆಯುತ್ತಿದೆಯೇ? (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು) | ಮಹಿಳಾ ತರಬೇತಿ ಯೋಜನೆಯಡಿ ಕೋಲಾರ ಜಿಲ್ಲೆಯಲ್ಲಿ ಪ್ರಸ್ತುತ ಯಾವುದೇ ತರಬೇತಿ ನಡೆಯುತ್ತಿರುವುದಿಲ್ಲ. |

ಮಮಇ/15/ಮಅನಿ/2022

Halappa B A

(ಹಾಲಪ್ಪ ಬಸಪ್ಪ ಆಚಾರ್)
ಮಾನ್ಯ ಗಣಿ ಮತ್ತು ಭೂವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ ಹಾಗೂ ಹಿರಿಯ
ನಾಗರೀಕರ ಸಬಲೀಕರಣ ಸಚಿವರು.

